# ಕನ್ನಡ ಸಾಹಿತ್ಯ ಪರಿಷತ್ತು

ಸ್ಥಾಪನೆ : ೧೯೧೫

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦೦೧೮
ದೂರವಾಣಿ : ೦೮೦–೨೬೬೧೨೯೯೧, ೨೬೬೨೩೫೮೪, ೨೨೪೨೩೮೬೭, ೨೬೬೭೨೯೯೨
ಮಿಂಚಂಚೆ : kannadaparishattu@gmail.com ಜಾಲತಾಣ : http://www.kasapa.in
ಯೂಟ್ಯೂಬ್ : http://www.youtube.com/c/KannadaParishattu
ಫೇಸ್‌ಬುಕ್ : https://www.facebook.com/KannadaSahityaParishattu ಟ್ವಿಟರ್ : @kannadaparishat App URL : https://bit.ly/Kasapa-app


ಕ್ರ. ಸಂ : ಕಸಾಪ/ಆಪ್ತಶಾಖೆ/೨೦೨೫-೨೬ ದಿನಾಂಕ : ೨೧-೦೪-೨೦೨೫

**ಜರೂರು**

**ಏಪ್ರಿಲ್ ೨೭ರಂದು ನಂದಿಹಳ್ಳಿಯಲ್ಲಿ ಆಯೋಜಿತವಾಗಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ ವಿಶೇಷ ಸಭೆ, ವಾರ್ಷಿಕ ಸಾಮಾನ್ಯ ಸಭೆ ಮತ್ತು ಕಾರ್ಯಕಾರಿ ಸಮಿತಿ ಸಭೆಯನ್ನು ಬಳ್ಳಾರಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯಕಾರಿ ಸಮಿತಿಯ ಕೋರಿಕೆಯ ಮೇರೆಗೆ ಬಿಸಿಲಿನ ತಾಪಮಾನದ ಕಾರಣ ಮುಂದೂಡಿಕೆ**

೧. ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ನಂದಿಹಳ್ಳಿಯಲ್ಲಿರುವ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಸಭಾಂಗಣದ ೨೦೨೫ರ ಏಪ್ರಿಲ್ ೨೭ ರಂದು ಆಯೋಜಿತವಾಗಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ ವಿಶೇಷ ಸಾಮಾನ್ಯ ಸಭೆ, ವಾರ್ಷಿಕ ಸಾಮಾನ್ಯ ಸಭೆ ಮತ್ತು ಕಾರ್ಯಕಾರಿ ಸಮಿತಿ ಸಭೆಯನ್ನು ಹವಾಮಾನ್ಯ ವೈಪರಿತ್ಯ ಮತ್ತು ಬಿಸಿಲಿನ ತಾಪಮಾನ ಏರಿಕೆಯಾದ ಕಾರಣ, ಕಸಾಪ ಬಳ್ಳಾರಿ ಜಿಲ್ಲಾ ಘಟಕದವರು ಮುಂದೂಡುವಂತೆ ಕೋರಿದ್ದು, ಈ ಕುರಿತು ಬಳ್ಳಾರಿ ಜಿಲ್ಲಾ ಆರೋಗ್ಯಾಧಿಕಾರಿಗಳ ತಜ್ಞ ಸಲಹೆಯನ್ನು ಕೇಳಿದಾಗ ಅವರೂ ಅದೇ ಅಭಿಪ್ರಾಯವನ್ನು ವ್ಯಕ್ತ ಪಡಿಸಿದ್ದ ಹಿನ್ನೆಲೆಯಲ್ಲಿ ಜೂನ್ ೨೨ರ ಭಾನುವಾರ ಸಂಡೂರಿನಲ್ಲಿ ನಡೆಸುವಂತೆ ಮುಂದೂಡಲಾಗಿದೆ.

೨. ದಿನಾಂಕ ೨೧-೦೩-೨೦೨೫ರಂದು ಕನ್ನಡ ಸಾಹಿತ್ಯ ಪರಿಷತ್ತಿನ ಪಂಪ ಸಭಾಂಗಣದಲ್ಲಿ ನಡೆದ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಬಳ್ಳಾರಿಯಲ್ಲಿ ೮೮ನೆಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಆಯೋಜಿತವಾಗಿರುವ ಹಿನ್ನೆಲೆಯಲ್ಲಿ ಏಪ್ರಿಲ್ ೨೭ರ ಭಾನುವಾರದಂದು ಕಾರ್ಯಕಾರಿ ಸಮಿತಿ ಸಭೆ ಮತ್ತು ಕನ್ನಡ ಸಾಹಿತ್ಯ ಪರಿಷತ್ತಿನ ೧೦೮ನೆಯ ವಾರ್ಷಿಕಾಧಿವೇಶನದ ವಾರ್ಷಿಕ ಸಾಮಾನ್ಯ ಸಭೆಯನ್ನು ಅದೇ ದಿನ ವಿಶೇಷ ಸಾಮಾನ್ಯ ಸಭೆಯನ್ನು ನಂದಿಹಳ್ಳಿಯಲ್ಲಿ ನಡೆಸಲು ತೀರ್ಮಾನಿಸಲಾಗಿತ್ತು.

೩. ಇದಕ್ಕಾಗಿ ಭರದ ಸಿದ್ದತೆಗಳು ನಡೆದಿದ್ದು ಏಪ್ರಿಲ್ ೪ರಂದು ನಿಯಮಾನುಸಾರವಾಗಿ ವಾರ್ಷಿಕ ಸಾಮಾನ್ಯ ಸಭೆಯ ತಿಳುವಳಿಕೆ ಪತ್ರ ಮತ್ತು ವಿಶೇಷ ಸಾಮಾನ್ಯ ಸಭೆಯ ತಿಳುವಳಿಕೆ ಪತ್ರವನ್ನು ಸಭೆ ಆಯೋಜಿತವಾಗುವದಕ್ಕಿಂತ ೨೧ದಿನಗಳ ಮೊದಲು ಹೊರಡಿಸಲಾಗಿತ್ತು.

೪. ದಿನಾಂಕ ೧೯-೦೪-೨೦೨೫ರಂದು ಬಳ್ಳಾರಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಡಾ ನಿಷ್ಠಿ ರುದ್ರಪ್ಪನವರು ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಿಗೆ ಪತ್ರವನ್ನು ಬರೆದು **"ನಮ್ಮ ಜಿಲ್ಲಾ ಕ.ಸಾ.ಪ ಕಾರ್ಯಕಾರಿ ಸಮಿತಿ ಸದಸ್ಯರೊಂದಿಗೆ, ಕನ್ನಡ ಪರ ಸಂಘಟನೆಗಳು, ಸಾರ್ವಜನಿಕರು ಮತ್ತು ಕೆಲ ಆಜೀವ ಸದಸ್ಯರೊಂದಿಗೆ ಚರ್ಚಿಸಲಾಗಿ ಬಳ್ಳಾರಿ ಜಿಲ್ಲೆಯಲ್ಲಿ ಬಿಸಿಲಿನ ತಾಪಮಾನ ತೀವ್ರತೆಯಿಂದ ಕೂಡಿದ್ದು, ರಾಜ್ಯದ ಬೇರೆ ಬೇರೆ ಜಿಲ್ಲೆಗಳಿಂದ ಆಗಮಿಸುವ ಸರ್ವಸದಸ್ಯರ ಆರೋಗ್ಯದ ಮೇಲೆ ಗಂಭೀರ ವ್ಯತಿರಿಕ್ತ ಪರಿಣಾಮ ಬೀರುವ ಹಿನ್ನೆಲೆಯಲ್ಲಿ ಸರ್ವಸದಸ್ಯರ ಸಭೆ ಮತ್ತು ವಿಶೇಷ ಸರ್ವ ಸದಸ್ಯರ ಸಭೆಯನ್ನು ಮುಂದೂಡುವುದು ಉತ್ತಮ' ಎಂಬ ಅಂಶವನ್ನು ಪ್ರಸ್ತಾಪಿಸಿದ್ದರು.** (ಕಾಗದದ ಪ್ರತಿಯನ್ನು ಲಗತ್ತಿಸಲಾಗಿದೆ-ಅನುಬಂಧ-೧)

೫. ಇದೇ ಸಮಯದಲ್ಲಿ ಕರ್ನಾಟಕ ರಾಜ್ಯ ಸರ್ಕಾರವು ಆದೇಶ ಸಂಖ್ಯೆ ಸಿಆಸುಇ(ಆಸು)೦೭ ಸ್ವೀಮರ ೨೦೨೫ ದಿನಾಂಕ ೨-೦೪-೨೦೨೫ರ ಆದೇಶದ ಅನ್ವಯ 'ವಿಜಯಪುರ ಮತ್ತು ಬಾಗಲಕೋಟೆ ಹಾಗೂ ಕಲಬುರಗಿ ವಿಭಾಗದ ಎಲ್ಲಾ ಜಿಲ್ಲೆಗಳಲ್ಲಿ ಹೆಚ್ಚಿನ ಬಿಸಿಲಿನ ತಾಪಮಾನದ ಹಿನ್ನೆಲೆಯಲ್ಲಿ ಪ್ರಸ್ತುತ ಜಾರಿಯಲ್ಲಿರುವ ಸರ್ಕಾರಿ ಕಚೇರಿಗಳ ವೇಳಾಪಟ್ಟಿಯ ಬದಲಾಗಿ ಏಪ್ರಿಲ್ ಮೇ ತಿಂಗಳಲ್ಲಿ ಬೆಳಿಗ್ಗೆ ೮.೦೦ ಗಂಟೆಯಿಂದ ಮಧ್ಯಾಹ್ನ ೧.೩೦ ಗಂಟೆಯವರೆಗೆ ಬದಲಾಯಿಸಿದನ್ನು' ಮಾನ್ಯ ಅಧ್ಯಕ್ಷರ ಗಮನಕ್ಕೆ ಬಳ್ಳಾರಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಘಟಕ ತಂದಿತು. (ಸರ್ಕಾರದ ಅದೇಶದ ಪ್ರತಿ ಅನುಬಂಧ-೨)

೨ನೇ ಪುಟಕ್ಕೆ..

Scanned with OKEN Scanner

೬.     ಈ ಹಿನ್ನೆಲೆಯಲ್ಲಿ ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷರು ಬಳ್ಳಾರಿ ಜಿಲ್ಲಾ ಆರೋಗ್ಯಾಧಿಕಾರಿಗಳಾದ ಡಾ. ರಮೇಶ್ ಬಾಬು ಅವರಿಗೆ ಪತ್ರವನ್ನು ಬರೆದು ತಜ್ಞ ಸಲಹೆಯನ್ನು ದಿನಾಂಕ ೧೯-೦೪-೨೦೨೫ರಂದು ಕೇಳಿದ್ದರು. ಅದಕ್ಕೆ ಅಂದೇ ಉತ್ತರಿಸಿದ್ದ ಡಾ. ರಮೇಶ್ ಬಾಬು ಅವರು **'ಬಳ್ಳಾರಿ ಜಿಲ್ಲೆಯಲ್ಲಿ ಏಪ್ರಿಲ್ ಹಾಗೂ ಮೇ ತಿಂಗಳಲ್ಲಿ ಬಿಸಿಲಿನ ತಾಪಮಾನ ತುಂಬಾ ಹೆಚ್ಚಾಗಿರುವುದರಿಂದ ಮಧ್ಯಾಹ್ನದ ಸಮಯದಲ್ಲಿ ಕಾರ್ಯಕ್ರಮವನ್ನು ಆಯೋಜಿಸುವುದು ಸಾರ್ವಜನಿಕರಿಗೆ, ವಿಶೇಷವಾಗಿ ಹಿರಿಯ ನಾಗರೀಕರಿಗೆ ಸೂರ್ಯಾಘಾತ (Sunstroke) ಅಥವಾ ಇತರ ಸಂಬಂಧಿತ ಆರೋಗ್ಯ ತೊಂದರೆಗಳಿಗೆ ಕಾರಣವಾಗಬಹುದು'** ಎನ್ನುವ ತಜ್ಞ ಅಭಿಪ್ರಾಯವನ್ನು ನೀಡಿದ್ದರು. (ಬಳ್ಳಾರಿ ಜಿಲ್ಲಾ ಆರೋಗ್ಯಾಧಿಕಾರಿಗಳ ಕಾಗದದ ಪ್ರತಿ ಅನುಬಂಧ-೩)

೭.     ಈ ಎಲ್ಲಾ ಹಿನ್ನೆಲೆಯಲ್ಲಿ, ಸಭೆಗೆ ಆಗಮಿಸುವ ಸದಸ್ಯರ ಆರೋಗ್ಯದ ಮೇಲಿನ ಕಾಳಜಿ ಮತ್ತು ಸ್ಥಳೀಯ ಸಾಹಿತ್ಯ ಪರಿಷತ್ತಿನ ಘಟಕದ ಭಾವನೆಗಳಿಗೆ ಸ್ಪಂದಿಸಿ, ಮಾನ್ಯ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು ಸಹಕಾರ ಸಂಘಗಳ ನಿಬಂಧಕರಿಗೆ ಪತ್ರವನ್ನು ಬರೆದು ಅವರೊಂದಿಗೆ ಚರ್ಚಿಸಿ, ಉದ್ದೇಶಿತ ಸಭೆಯನ್ನು ೨೨ ಜೂನ್ ೨೦೨೫ಕ್ಕೆ ಮುಂದೂಡಲು ಯಾವ ಅಭ್ಯಂತರವೂ ಇರುವುದಿಲ್ಲ ಎಂದಿರುವ ಹಿನ್ನೆಲೆಯಲ್ಲಿ, ಸಾರ್ವಜನಿಕ ಹಿತಾಸಕ್ತಿಯಲ್ಲಿ, ಸಭೆಗೆ ಆಗಮಿಸುವವರ ಆರೋಗ್ಯದ ಕಾಳಜಿಯಿಂದ ಭಾನುವಾರ ಜೂನ್ ೨೨ಕ್ಕೆ ಮುಂದೂಡುವುದು ಅನಿವಾರ್ಯವಾಗಿರುತ್ತದೆ.

**(ಎನ್.ಎಸ್. ಶ್ರೀಧರ ಮೂರ್ತಿ)**
ಸಂಚಾಲಕರು, ಮಾಧ್ಯಮ ವಿಭಾಗ
ಕನ್ನಡ ಸಾಹಿತ್ಯ ಪರಿಷತ್ತು

Scanned with OKEN Scanner

ಅನುಬಂಧ - ೧

# ಕನ್ನಡ ಸಾಹಿತ್ಯ ಪರಿಷತ್ತು ಬಳ್ಳಾರಿ ಜಿಲ್ಲಾ ಘಟಕ

ಸಂಪರ್ಕ ವಿಳಾಸ : ನಿಷ್ಠಿ ಓಣಿ, ಬಳ್ಳಾರಿ – ೫೮೩೧೦೧
ಸಂಚಾರಿ ದೂರವಾಣಿ : ೯೩೪೨೭೭೬೩೯೮, ಇಮೇಲ್ : rudrappa.nisty@yahoo.com
ಸ್ಥಾಪನೆ : ೧೯೧೫

ಡಾ. ನಿಷ್ಠಿ ರುದ್ರಪ್ಪ
ಅಧ್ಯಕ್ಷರು

ಕ್ರ. ಸಂ. 06/2025-26

ದಿನಾಂಕ : ೧೯-೦೪-೨೫

ಇವರಿಗೆ,
ಅಧ್ಯಕ್ಷರು,
ಕನ್ನಡ ಸಾಹಿತ್ಯ ಪರಿಷತ್ತು,
ಬೆಂಗಳೂರು.

ಮಾನ್ಯರೆ,

ವಿಷಯ : ೨೭-೦೪-೨೦೨೫ ರಂದು ನಡೆಯಲಿರುವ ಸಾಮಾನ್ಯ ಸರ್ವಸದಸ್ಯರ ಸಭೆ ಮತ್ತು ವಿಶೇಷ ಸರ್ವಸದಸ್ಯರ ಸಭೆಯನ್ನು ಮುಂದೂಡುವಂತೆ ಮನವಿ.

* * *

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಬಳ್ಳಾರಿ ಜಿಲ್ಲೆ ಸಂಡೂರು ತಾಲ್ಲೂಕಿನ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ನಂದಿಹಳ್ಳಿ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ದಿನಾಂಕ ೨೭-೦೪-೨೦೨೫ ಭಾನುವಾರದಂದು ರಾಜ್ಯ ಕ.ಸಾ.ಪ ಸಾಮಾನ್ಯ ಸರ್ವಸದಸ್ಯರ ಸಭೆ ಮತ್ತು ವಿಶೇಷ ಸರ್ವ ಸದಸ್ಯರ ಸಭೆಯನ್ನು ಆಯೋಜಿಸಿರುತ್ತೀರಿ.

ಈ ಬಗ್ಗೆ ನಮ್ಮ ಜಿಲ್ಲಾ ಕ.ಸಾ.ಪ ಕಾರ್ಯಕಾರಿ ಸಮಿತಿ ಸದಸ್ಯರೊಂದಿಗೆ, ಕನ್ನಡ ಪರ ಸಂಘಟನೆಗಳು, ಸಾರ್ವಜನಿಕರು ಮತ್ತು ಕೆಲ ಆಜೀವ ಸದಸ್ಯರೊಂದಿಗೆ ಚರ್ಚಿಸಲಾಗಿ ಬಳ್ಳಾರಿ ಜಿಲ್ಲೆಯಲ್ಲಿ ಬಿಸಿಲಿನ ತಾಪಮಾನ ತೀವ್ರತೆಯಿಂದ ಕೂಡಿದ್ದು, ರಾಜ್ಯದ ಬೇರೆಬೇರೆ ಜಿಲ್ಲೆಗಳಿಂದ ಆಗಮಿಸುವ ಸರ್ವಸದಸ್ಯರ ಆರೋಗ್ಯದ ಮೇಲೆ ಗಂಭೀರ ವ್ಯತಿರಿಕ್ತ ಪರಿಣಾಮ ಬೀರುವ ಹಿನ್ನೆಲೆಯಲ್ಲಿ ಸಾಮಾನ್ಯ ಸರ್ವಸದಸ್ಯರ ಸಭೆ ಮತ್ತು ವಿಶೇಷ ಸರ್ವ ಸದಸ್ಯರ ಸಭೆಯನ್ನು ಮೂಂದೂಡಿದರೆ ಉತ್ತಮವೆಂಬ ಅಭಿಪ್ರಾಯ ವ್ಯಕ್ತವಾಗಿರುತ್ತದೆ.

ಕರ್ನಾಟಕ ಸರ್ಕಾರವು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಅದರಲ್ಲೂ ಬಳ್ಳಾರಿ ಜಿಲ್ಲೆಯಲ್ಲಿ ಬಿರು ಬೇಸಿಗೆಯ ಹಿನ್ನೆಲೆಯಲ್ಲಿ ಕಚೇರಿಯ ವೇಳೆಯನ್ನು ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಬೆಳಗ್ಗೆ ೮-೦೦ ಗಂಟೆಯಿಂದ ಮಧ್ಯಾಹ್ನ ೧-೦೦ ಗಂಟೆಯವರೆಗೆ ಕಾರ್ಯ ನಿರ್ವಹಿಸುವಂತೆ ಘೋಷಣೆ ಮಾಡಿರುತ್ತದೆ.

ಈ ಹಿನ್ನೆಲಯಲ್ಲಿ ಸಾಮಾನ್ಯ ಸರ್ವಸದಸ್ಯರ ಸಭೆ ಮತ್ತು ವಿಶೇಷ ಸರ್ವಸದಸ್ಯರ ಸಭೆಯನ್ನು ಬೇಸಿಗೆ ಕಳೆದ ನಂತರ ಜೂನ್ ತಿಂಗಳಲ್ಲಿ ಆಯೋಜಿಸಿದರೆ ಉತ್ತಮವೆಂಬ ಜನಾಭಿಪ್ರಾಯದ ಹಿನ್ನೆಲಯಲ್ಲಿ ದಯವಿಟ್ಟು ಸಭೆಯನ್ನು ಮುಂದೂಡುವಂತೆ ಈ ಮೂಲಕ ತಮ್ಮಲ್ಲಿ ವಿನಂತಿಸುತ್ತೇನೆ.

ಧನ್ಯವಾದಗಳೊಂದಿಗೆ,

ತಮ್ಮ ವಿಶ್ವಾಸಿಗಳು,

(ಡಾ. ನಿಷ್ಠಿ ರುದ್ರಪ್ಪ)
ಜಿಲ್ಲಾಧ್ಯಕ್ಷರು

Nisty | 2025.04.19 14:06
Scanned with OKEN Scanner

ಅನುಬಂಧ - 1

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೆಳಗಾವಿ ವಿಭಾಗದ ವಿಜಯಪುರ ಮತ್ತು ಬಾಗಲಕೋಟೆ ಹಾಗೂ ಕಲಬುರಗಿ ವಿಭಾಗದ ಎಲ್ಲಾ ಜಿಲ್ಲೆಗಳಿಗೆ 2025ರ ಏಪ್ರಿಲ್ ಮತ್ತು ಮೇ ತಿಂಗಳಿನಲ್ಲಿ ಕಚೇರಿ ಕೆಲಸದ ವೇಳೆಯನ್ನು ಬದಲಾವಣೆ ಮಾಡುವ ಬಗ್ಗೆ.

**ಓದಲಾಗಿದೆ:** ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು, ರವರ ಮನವಿ ಸಂಖ್ಯೆ: ಜಿಇಎ/139/2025, ದಿನಾಂಕ:21.02.2025.

*******

**ಪ್ರಸ್ತಾವನೆ**

ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು ರವರು ಬೆಳಗಾವಿ ವಿಭಾಗದ ವಿಜಯಪುರ, ಬಾಗಲಕೋಟೆ ಹಾಗೂ ಕಲಬುರಗಿ ವಿಭಾಗದ ಎಲ್ಲಾ ಜಿಲ್ಲೆಗಳಲ್ಲಿ ಬಿಸಿಲಿನ ತಾಪಮಾನ ಹೆಚ್ಚಾಗಿರುವುದರಿಂದ ನೌಕರರು ಕರ್ತವ್ಯ ನಿರ್ವಹಿಸುವಲ್ಲಿ ಎದುರಿಸುತ್ತಿರುವ ತೊಂದರೆಯನ್ನು ಮಾನವೀಯತೆ ದೃಷ್ಟಿಯಿಂದ ಪರಿಗಣಿಸಿ, ಏಪ್ರಿಲ್ ಮತ್ತು ಮೇ ಮಾಹೆಗಳಲ್ಲಿ ಕಚೇರಿ ಕೆಲಸದ ಸಮಯವನ್ನು ಬೆಳಿಗ್ಗೆ 8.00 ರಿಂದ 1.30 ರವರೆಗೆ ನಿಗದಿಪಡಿಸಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ (ಆಸು) 07 ಸ್ಕೀಮರ 2025,**
**ಬೆಂಗಳೂರು, ದಿನಾಂಕ: 02-04-2025**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2025 ನೇ ಸಾಲಿನ ಏಪ್ರಿಲ್ ಮತ್ತು ಮೇ ಮಾಹೆಗಳಲ್ಲಿ ಹೆಚ್ಚಿನ ಬಿಸಿಲಿನ ತಾಪಮಾನದ ಹಿನ್ನೆಲೆಯಲ್ಲಿ ಬೆಳಗಾವಿ ವಿಭಾಗದ ವಿಜಯಪುರ ಮತ್ತು ಬಾಗಲಕೋಟೆ ಹಾಗೂ ಕಲಬುರಗಿ ವಿಭಾಗದ ಎಲ್ಲಾ ಜಿಲ್ಲೆಗಳಿಗೆ ಪ್ರಸ್ತುತ ಜಾರಿಯಲ್ಲಿರುವ ಸರ್ಕಾರಿ ಕಚೇರಿಗಳ ವೇಳಾಪಟ್ಟಿಯ ಬದಲಾಗಿ ಏಪ್ರಿಲ್ ಮತ್ತು ಮೇ ತಿಂಗಳುಗಳಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಬದಲಾಯಿಸಿ ಆದೇಶಿಸಿದೆ.

2. ಈ ಜಿಲ್ಲೆಗಳಲ್ಲಿನ ಸರ್ಕಾರಿ ನೌಕರರು ಬದಲಾದ ಸಮಯದಲ್ಲಿ ತಮ್ಮ ಕರ್ತವ್ಯವನ್ನು ಎಂದಿನಂತೆ ಯಾವುದೇ ಲೋಪ/ಅಡೆತಡೆಯಿಲ್ಲದೆ ಕರ್ತವ್ಯ ನಿರ್ವಹಿಸತಕ್ಕದ್ದು. ಸಾರ್ವಜನಿಕರಿಗೆ ಯಾವುದೇ ರೀತಿ ಅನಾನುಕೂಲತೆಯಾಗದಂತೆ ಮತ್ತು ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಗಳು ತುರ್ತು ಸಂದರ್ಭದಲ್ಲಿ ಯಾವುದೇ ಕಾರ್ಯವನ್ನು ನಿರ್ವಹಿಸಲು ನಿರ್ದೇಶಿಸಿದಲ್ಲಿ ಸಮಯದ ಪರಿಮಿತಿಯಿಲ್ಲದೆ ಕರ್ತವ್ಯ ನಿರ್ವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Vimala 02/04/2025
**(ವಿಮಲಾಕ್ಷಿ .ಬಿ)**
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಆಡಳಿತ ಸುಧಾರಣೆ-ಸ್ಕೀಮರ-ತಪಾಸಣೆ)

2/4/25

**ಇವರಿಗೆ:**

1. ಮಹಾಲೇಖಪಾಲರು (ಲೆಕ್ಕಪತ್ರ/ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.

...2

Scanned with OKEN Scanner

ಅನುಬಂಧ - 2

# ಕರ್ನಾಟಕ ಸರ್ಕಾರ

## ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯ, ಬಳ್ಳಾರಿ.

Telephone: 08392-276250 e-mail: dhobellari@gmail.com

ಸಂಖ್ಯೆ: ಜಿಆಕುಕಇ/ಅಭಿವೃದ್ಧಿ/ /2025-26 ದಿನಾಂಕ: 19.04.2025.

ಇವರಿಗೆ,
ಶ್ರೀ.ನಾಡೋಜ ಡಾ॥ ಮಹೇಶ್ ಜೋಶಿ ರವರಿಗೆ,
ಅಧ್ಯಕ್ಷರು,
ಕನ್ನಡ ಸಾಹಿತ್ಯ ಪರಿಷತ್ತು,
ಕರ್ನಾಟಕ ಸರ್ಕಾರ ರಾಜ್ಯ ಸಚಿವರ ದರ್ಜೆಯ ಸ್ಥಾನಮಾನದಲ್ಲಿ,
ಬೆಂಗಳೂರು.

ಮಾನ್ಯರೇ,

ವಿಷಯ: ಬಳ್ಳಾರಿ ಜಿಲ್ಲೆಯ ಸಂಡೂರು ತಾಲೂಕಿನ ನಂದಿಹಳ್ಳಿಯಲ್ಲಿರುವ ವಿಜಯನಗರ ಶ್ರೀ.ಕೃಷ್ಣದೇವರಾಯ ವಿಶ್ವವಿದ್ಯಾಲಯ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಸಭಾಂಗಣದಲ್ಲಿ ದಿನಾಂಕ 27.04.2025ರಂದು ಆಯೋಜಿತವಾಗಿರುವ ಕನ್ನಡ ಸಾಹಿತ್ಯ ಪರಿಷತ್ತಿನ ವಿಶೇಷ ಸಭೆ, ವಾರ್ಷಿಕ ಸಾಮಾನ್ಯ ಸಭೆ ಮತ್ತು ಕಾರ್ಯಕಾರಿ ಸಮಿತಿ ಸಭೆಯ ಕಾರ್ಯಕ್ರಮವನ್ನು ಆಯೋಜಿಸಲು ಜನ ಸಾಮಾನ್ಯರ ಬಿಸಿಲಿನ ತಾಪಮಾನದ ಕುರಿತು ತಜ್ಞ ಅಭಿಪ್ರಾಯವನ್ನು ಸಲ್ಲಿಸುತ್ತಿರುವ ಬಗ್ಗೆ.

ಉಲ್ಲೇಖ:
1. ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ (ಆಸು) 07 ಸ್ಥೀಮರ 2025 ದಿನಾಂಕ 02.04.2025.
2. ತಮ್ಮ ಪತ್ರ ಸಂಖ್ಯೆ ಕ.ಸಂ/ಕಸಾಪ/ಮಾನ್ಯ ಅಧ್ಯಕ್ಷರ ಆಪ್ತಶಾಖೆ/2025-26 ದಿನಾಂಕ 19.04.2025ರ ಮೇರೆಗೆ.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬಳ್ಳಾರಿ ಜಿಲ್ಲೆಯ ಸಂಡೂರು ತಾಲೂಕಿನ ನಂದಿಹಳ್ಳಿಯಲ್ಲಿರುವ ವಿಜಯನಗರ ಶ್ರೀ.ಕೃಷ್ಣದೇವರಾಯ ವಿಶ್ವವಿದ್ಯಾಲಯ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಸಭಾಂಗಣದಲ್ಲಿ ಆಯೋಜಿತವಾಗಿರುವ ಕನ್ನಡ ಸಾಹಿತ್ಯ ಪರಿಷತ್ತಿನ ವಿಶೇಷ ಸಭೆ, ವಾರ್ಷಿಕ ಸಾಮಾನ್ಯ ಸಭೆ ಮತ್ತು ಕಾರ್ಯಕಾರಿ ಸಮಿತಿ ಸಭೆಯನ್ನು ಏಪ್ರಿಲ್ 27.04.2025ರ ಭಾನುವಾರ ಬೆಳಿಗ್ಗೆ 11:00 ಗಂಟೆಗೆ ಆಯೋಜಿಸಲು ಉದ್ದೇಶಿಸಿರುವುದರಿಂದ ಬಳ್ಳಾರಿ ಜಿಲ್ಲೆಯ ಜನ ಸಾಮಾನ್ಯರ ಬಿಸಿಲಿನ ತಾಪಮಾನದ ಕುರಿತು ತಜ್ಞರ ಅಭಿಪ್ರಾಯವನ್ನು ಸಲ್ಲಿಸುವಂತೆ ಉಲ್ಲೇಖಿತ ಪತ್ರ(2)ರನ್ವಯ ಕೋರಿರುತ್ತೀರಿ.

ಮುಂದುವರೆದು, ಬಳ್ಳಾರಿ ಜಿಲ್ಲೆಯಲ್ಲಿ ಏಪ್ರಿಲ್ ಹಾಗೂ ಮೇ ತಿಂಗಳಲ್ಲಿ ಬಿಸಿಲಿನ ತಾಪಮಾನ ತುಂಬಾ ಹೆಚ್ಚಾಗಿರುವುದರಿಂದ, ಮಧ್ಯಾಹ್ನದ ಸಮಯದಲ್ಲಿ ಕಾರ್ಯಕ್ರಮವನ್ನು ಆಯೋಜಿಸುವುದು ಸಾರ್ವಜನಿಕರಿಗೆ, ವಿಶೇಷವಾಗಿ ಹಿರಿಯ ನಾಗರಿಕರಿಗೆ, ಸೂರ್ಯಾಘಾತ (Sunstoke) ಅಥವಾ ಇತರ ಸಂಬಂಧಿತ ಆರೋಗ್ಯ ತೊಂದರೆಗಳಿಗೆ ಕಾರಣವಾಗಬಹುದು.

ಈ ನಿಟ್ಟಿನಲ್ಲಿ ಸರ್ಕಾರವು ಈಗಾಗಲೇ ಉಲ್ಲೇಖಿತ ಪತ್ರ(1)ರನ್ವಯ ಏಪ್ರಿಲ್ ಮತ್ತು ಮೇ ಮಾಹೆಗಳಲ್ಲಿ ಹೆಚ್ಚಿನ ಬಿಸಿಲಿನ ತಾಪಮಾನದ ಹಿನ್ನೆಲೆಯಲ್ಲಿ ಮತ್ತು ಬಿಸಿಲಿನಿಂದ ರಕ್ಷಣೆಯ ಸಲುವಾಗಿ ಬೆಳಿಗ್ಗೆ 8.00 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಮಾತ್ರ ಸರ್ಕಾರಿ ಕಚೇರಿಯ ಕರ್ತವ್ಯದ ಸಮಯವನ್ನು ಬದಲಾಯಿಸಿ ಕಾರ್ಯನಿರ್ವಹಿಸಲು ಸೂಚನೆ ನೀಡಲಾಗಿರುತ್ತದೆ.

ಹೀಗಾಗಿ, ಸಾರ್ವಜನಿಕರ ಮತ್ತು ಆರೋಗ್ಯದ ಭದ್ರತೆಯ ಹಿತದೃಷ್ಟಿಯಿಂದ, ದಿನಾಂಕ 27.04.2025ರಂದು ನಿಗದಿಯಾದ / ಆಯೋಜಿಸಲಿರುವ ವಾರ್ಷಿಕ ಸಾಮಾನ್ಯ ಸಭೆ ಹಾಗೂ ಕಾರ್ಯಕಾರಿ ಸಮಿತಿಯ ಸಭೆಯನ್ನು ಬೆಳಿಗ್ಗೆ 8.00 ರಿಂದ 1.30 ಗಂಟೆಗಳ ನಡುವೆ ಆಯೋಜಿಸಬೇಕೆಂದು ಈ ಮೂಲಕ ತಜ್ಞರ ಅಭಿಪ್ರಾಯವನ್ನು ಸಲ್ಲಿಸುವ ಮೂಲಕ ತಮ್ಮಲ್ಲಿ ವಿನಮ್ರವಾಗಿ ವಿನಂತಿಸಿಕೊಳ್ಳುತ್ತೇವೆ.

ತಮ್ಮ ವಿಶ್ವಾಸಿ,

(ಸಹಿ) 19.4.25

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು,
ಬಳ್ಳಾರಿ.

Scanned with OKEN Scanner